# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಲಷ್ಕರಿನಾಯ್ಕ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹರಪನಹಳ್ಳಿ ಇವರ ವಿರುದ್ಧ ಶಿಸ್ತು ಕ್ರಮ – ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತ-2 ರವರಿಗೆ ವಹಿಸುವ ಬಗ್ಗೆ - ಆದೇಶ.

ಓದಲಾಗಿದೆ:- 1) ಅಪರ ನಿಬಂಧಕರು ವಿಚಾರಣೆಗಳು-6, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ. Compt/ Uplok/ BD-214 /2005/ ARE-6 ದಿನಾಂಕ. 27.08.2016.

ಮಾನ್ಯ ಉಪ ಲೋಕಾಯುಕ್ತ-2ರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3)ರಡಿಯಲ್ಲಿ ಸಲ್ಲಿಸಿರುವ ವರದಿ ಸಂಖ್ಯೆ Compt/ Uplok/ BD-214 / 2005/ ARE-6 ದಿನಾಂಕ. 09.08.2016.

------

## ಪ್ರಸ್ತಾವನೆ

ಅಪರ ನಿಬಂಧಕರು ವಿಚಾರಣೆಗಳು-6, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ರವರು ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ 27.08.2016ರ ಪತ್ರದ ಜೊತೆ ಮಾನ್ಯ ಉಪಲೋಕಾಯುಕ್ತ-2ರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಸೆಕ್ಷನ್ 12 (3) ರನ್ವಯ ನೀಡಿರುವ ವರದಿಯನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಕಳುಹಿಸುತ್ತಾ, ಮಾನ್ಯ ಉಪ ಲೋಕಾಯುಕ್ತ-2ರವರ ಶಿಫಾರಸ್ಸಿನಂತೆ ಕ್ರಮವಹಿಸಲು ಕೋರಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತ-2ರವರು ಲೋಕಾಯುಕ್ತ ಕಾಯ್ದೆ ಕಲಂ 12 (3)ರಂತೆ ಸಲ್ಲಿಸಿರುವ ವರದಿ ಹಾಗೂ ಲಗತ್ತಿಸಿರುವ ದಾಖಲೆಗಳನ್ನು ಪರಿಶೀಲಿಸಿದೆ. ಶ್ರೀ ಹೆಚ್. ದುಗ್ಗಪ್ಪ ಶ್ಯಾಮನೂರ ಹನುಮಂತಪ್ಪ, ಸಂಪಾದಕರು, ಅವಾಂತರ ಪತ್ರಿಕೆ, ದಾವಣಗೆರೆ ರವರು ಶ್ರೀ ಲಷ್ಕರಿ ನಾಯ್ಕ್, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹರಪನಹಳ್ಳಿ ಇವರು ಸೋನಿಯಾ ಪ್ಯಾಕೇಜ್ ಯೋಜನೆಯಡಿ ಹರಪನಹಳ್ಳಿ ತಾಲ್ಲೂಕಿಗೆ ವಿಶೇಷ ಅಭಿವೃದ್ಧಿ ಯೋಜನೆಗೆ ಮತ್ತು ಕುಡಿಯುವ ನೀರು ಸರಬರಾಜು ಕಾಮಗಾರಿಗಳಿಗೆ ಬಿಡುಗಡೆಯಾದ ಅನುದಾನವನ್ನು ದುರುಪಯೋಗಪಡಿಸಿಕೊಂಡಿರುತ್ತಾರೆಂದು ಕರ್ನಾಟಕ ಲೋಕಾಯುಕ್ತ ಕಚೇರಿಯಲ್ಲಿ ದೂರನ್ನು ಸಲ್ಲಿಸಿರುತ್ತಾರೆ.

ಸದರಿ ದೂರಿಗೆ ಸಂಬಂಧಿಸಿದಂತೆ ಕರ್ನಾಟಕ ಲೋಕಾಯುಕ್ತ ಕಚೇರಿಯು ತನಿಖೆಯನ್ನು ಕೈಗೊಂಡು ಸಲ್ಲಿಸಿರುವ ವರದಿಯಲ್ಲಿ ಸರ್ಕಾರವು ಬಜೆಟ್‌ನಲ್ಲಿ ವಿಶೇಷ ಅಭಿವೃದ್ಧಿ ಯೋಜನೆಯಡಿ ಮಂಜೂರು ಮಾಡಿರುವ 1735/- ಲಕ್ಷಗಳ ಅನುದಾನದ ಪೈಕಿ ನಿರ್ದಿಷ್ಟ ಕಾಮಗಾರಿಗಳನ್ನು ಕೈಗೊಳ್ಳಲು ಬಿಡುಗಡೆ ಮಾಡಲಾದ 26.07 ಲಕ್ಷ ರೂ.ಗಳನ್ನು ಜಿಲ್ಲಾ ಪಂಚಾಯತಿಯ

ಆದೇಶದ ಮೇರೆಗೆ ಮಾರ್ಗಪಲ್ಲಟ ಮಾಡಿ ಖರ್ಚು ಮಾಡಲಾಗಿದೆಯೆಂದು, ಇದಕ್ಕೆ ಸರ್ಕಾರದ ಅನುಮೋದನೆಯನ್ನು ಪಡೆದಿರುವುದಿಲ್ಲವೆಂದು ತಿಳಿಸಿರುತ್ತಾರೆ.

ಸದರಿ ದೂರು ಹಾಗೂ ತನಿಖಾ ವರದಿಗೆ ಸಂಬಂಧಿಸಿದಂತೆ ಲೋಕಾಯುಕ್ತ ಕಚೇರಿಯು ಆಪಾದಿತ ಅಧಿಕಾರಿಯ ಆಕ್ಷೇಪಣೆಯನ್ನು ಪಡೆಯಲಾಗಿದ್ದು, ಆಪಾದಿತರು ತಮ್ಮ ವಿರುದ್ಧ ಮಾಡಿರುವ ಆಪಾದನೆಗಳನ್ನು ಅಲ್ಲಗಳೆದಿರುತ್ತಾರೆಂದು ತಿಳಿಸಿರುತ್ತಾರೆ.

ಮಾನ್ಯ ಉಪ ಲೋಕಾಯುಕ್ತ-2 ರವರು ತನಿಖಾ ವರದಿ, ಆಪಾದಿತರು ಸಲ್ಲಿಸಿರುವ ಆಕ್ಷೇಪಣೆಗಳು ಮತ್ತು ದಾಖಲಾತಿಗಳನ್ನು ಪರಿಶೀಲಿಸಿದ್ದು, ಪ್ರಕರಣದಲ್ಲಿ ಭಾಗಿಯಾಗಿರುವ ಆಪಾದಿತ ಅಧಿಕಾರಿಯಾದ ಶ್ರೀ ಲಷ್ಕರಿನಾಯ್ಕ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರು ಸರ್ಕಾರವು ಬಜೆಟ್‌ನಲ್ಲಿ ವಿಶೇಷ ಅಭಿವೃದ್ಧಿ ಯೋಜನೆಯಡಿ ಮಂಜೂರು ಮಾಡಿರುವ 1735/- ಲಕ್ಷಗಳ ಅನುದಾನದ ಪೈಕಿ ನಿರ್ದಿಷ್ಟ ಕಾಮಗಾರಿಗಳನ್ನು ಕೈಗೊಳ್ಳಲು ಬಿಡುಗಡೆ ಮಾಡಲಾದ 26.07 ಲಕ್ಷ ರೂ.ಗಳನ್ನು ದಾವಣಗೆರೆ ಜಿಲ್ಲಾ ಪಂಚಾಯತಿಯು ದಿನಾಂಕ 10.02.2003ರಂದು ನೀಡಿದ ಆದೇಶದ ಮೇರೆಗೆ ಮಾರ್ಗಪಲ್ಲಟ ಮಾಡಿ ಖರ್ಚು ಮಾಡಲಾಗಿದೆಯೆಂದು, ಸರ್ಕಾರದ ಅನುದಾನವನ್ನು ಮಾರ್ಗಪಲ್ಲಟ ಮಾಡಲು ಸರ್ಕಾರಕ್ಕೆ ಮಾತ್ರ ಅಧಿಕಾರವಿದ್ದು, ಜಿಲ್ಲಾ ಪಂಚಾಯತಿಗೆ ಅಧಿಕಾರವಿರುವುದಿಲ್ಲವೆಂದು, ಸದರಿ ಅನುದಾನವನ್ನು ಜಿಲ್ಲಾ ಪಂಚಾಯತಿಯಿಂದ ಮರು ಹೊಂದಾಣಿಕೆ ಮಾಡುವ ಪೂರ್ವದಲ್ಲಿ ಸರ್ಕಾರದ ಅನುಮೋದನೆಯನ್ನು ಪಡೆದಿರುವುದಿಲ್ಲವೆಂದು, ಸದರಿಯವರು ಸರ್ಕಾರಿ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠೆ ತೋರದೆ, ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ಕರ್ತವ್ಯ ಲೋಪ ಎಸಗಿ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966ರ 3(1)ನ್ನು ಉಲ್ಲಂಘಿಸಿ ದುರ್ನಡತೆಯನ್ನು ಎಸಗಿರುವುದು ಮೇಲ್ನೋಟಕ್ಕೆ ಕಂಡುಬರುವುದರಿಂದ ಇವರ ವಿರುದ್ಧದ ಆರೋಪಗಳ ಬಗ್ಗೆ ಇಲಾಖಾ ವಿಚಾರಣೆ ನಡೆಸುವ ಸಲುವಾಗಿ ಪ್ರಕರಣವನ್ನು ತಮಗೆ ವಹಿಸುವಂತೆ ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಪ್ರಕರಣಕ್ಕೆ ಸಂಬಂಧಿಸಿದ ಎಲ್ಲಾ ಮಾಹಿತಿ ಮತ್ತು ದಾಖಲೆಗಳನ್ನು ಪರಿಶೀಲಿಸಿದೆ. ಶ್ರೀ ಲಷ್ಕರಿನಾಯ್ಕ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹರಪನಹಳ್ಳಿ ಇವರು ಸರ್ಕಾರವು ಬಜೆಟ್‌ನಲ್ಲಿ ವಿಶೇಷ ಅಭಿವೃದ್ಧಿ ಯೋಜನೆಯಡಿ ಮಂಜೂರು ಮಾಡಿರುವ 1735/- ಲಕ್ಷಗಳ ಅನುದಾನದ ಪೈಕಿ ನಿರ್ದಿಷ್ಟ ಕಾಮಗಾರಿಗಳನ್ನು ಕೈಗೊಳ್ಳಲು ಬಿಡುಗಡೆ ಮಾಡಲಾದ 26.07 ಲಕ್ಷ ರೂ.ಗಳನ್ನು ದಾವಣಗೆರೆ ಜಿಲ್ಲಾ ಪಂಚಾಯತಿಯ ಆದೇಶದ ಮೇರೆಗೆ ಮಾರ್ಗಪಲ್ಲಟ ಮಾಡಿ ಖರ್ಚು ಮಾಡಿರುವ ಕ್ರಮಕ್ಕೆ ಸರ್ಕಾರದ ಅನುಮೋದನೆ ಪಡೆಯದೇ ಇರುವುದು ತನಿಖಾ ವರದಿ / ದಾಖಲೆಗಳಿಂದ ಕಂಡುಬರುತ್ತದೆ. ಹಾಗಾಗಿ ಆಪಾದಿತ ಅಧಿಕಾರಿಯು ಸರ್ಕಾರಿ ನೌಕರರಾಗಿ ತಮ್ಮ ಕರ್ತವ್ಯ ನಿರ್ವಹಣೆಯಲ್ಲಿ ಪರಿಪೂರ್ಣ ಪ್ರಾಮಾಣಿಕತೆ ಹಾಗೂ ಸಂಪೂರ್ಣ ನಿಷ್ಠೆ ತೋರದೆ ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966ರ ನಿಯಮ 3(1)ನ್ನು ಉಲ್ಲಂಘಿಸಿ ದುರ್ನಡತೆಯನ್ನು ಎಸಗಿರುವುದು ಮೇಲ್ನೋಟಕ್ಕೆ ಕಂಡುಬರುವುದರಿಂದ ಇವರ ವಿರುದ್ಧದ ಆರೋಪದ ಬಗ್ಗೆ ಇಲಾಖಾ ವಿಚಾರಣೆ ನಡೆಸುವುದು ಅವಶ್ಯವಿರುತ್ತದೆ. ಆದ್ದರಿಂದ ಸದರಿ ಆಪಾದಿತ ಅಧಿಕಾರಿಯ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆ ನಡೆಸಲು ಪ್ರಕರಣವನ್ನು ಮಾನ್ಯ

ಉಪ ಲೋಕಾಯುಕ್ತ-2 ರವರಿಗೆ ವಹಿಸಲು ಸರ್ಕಾರವು ತೀರ್ಮಾನಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಆದೇಶ ಸಂಖ್ಯೆ : ಗ್ರಾಅಪ 113 ಇಎನ್‌ಕ್ಯೂ 2016 ಬೆಂಗಳೂರು, ದಿನಾಂಕ. 25.10.2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು ಶ್ರೀ ಲಷ್ಕರಿನಾಯ್ಕ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹರಪನಹಳ್ಳಿ (ಹಾಲಿ ಕಾರ್ಯಪಾಲಕ ಇಂಜಿನಿಯರ್, ಲೋಕೋಪಯೋಗಿ ವಿಭಾಗ, ಕೊಪ್ಪಳ) ಇವರ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11ರಂತೆ ನಡೆಸುವ ಸಲುವಾಗಿ ಪ್ರಕರಣವನ್ನು ಸದರಿ ನಿಯಮಗಳ ನಿಯಮ 14(ಎ)ರ ಅನುಸಾರ ಮಾನ್ಯ ಉಪಲೋಕಾಯುಕ್ತ-2ರವರಿಗೆ ವಹಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಸಿದ್ದೇಶ್ ಪೊತಲುಕಟ್ಟಿ)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ:**

1. ಮಹಾಲೇಖಪಾಲರು, (ಅ ಮತ್ತು ಇ) ಕರ್ನಾಟಕ, ಬೆಂಗಳೂರು.
2. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ.
4. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
5. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಬೆಂಗಳೂರು.
6. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ದಾವಣಗೆರೆ.
7. ಅಪರ ನಿಬಂಧಕರು ವಿಚಾರಣೆಗಳು-6, ಕರ್ನಾಟಕ ಲೋಕಾಯುಕ್ತ ಕಚೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
8. ಶ್ರೀ ಲಷ್ಕರಿನಾಯ್ಕ, ಕಾರ್ಯಪಾಲಕ ಇಂಜಿನಿಯರ್, ಲೋಕೋಪಯೋಗಿ ವಿಭಾಗ, ಕೊಪ್ಪಳ
9. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
10. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ (ಸೇವೆಗಳು-ಎ,ಬಿ&ಸಿ).
11. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಜಂಟಿ ಕಾರ್ಯದರ್ಶಿ (ಆಡಳಿತ) ಇವರ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರು.
12. ಹೆಚ್ಚುವರಿ ಪ್ರತಿ : ರಕ್ಷಾ ಕಡತ : ಸೂಚನಾ ಫಲಕ : ಕಂಪ್ಯೂಟರ್ ಸೆಲ್.